**ಕರ್ನಾಟಕ ವಿಧಾನ ಪರಿಷತ್**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 196 |
| ಸದಸ್ಯರ ಹೆಸರು | : | ಶ್ರೀ ಮಧು ಜಿ.ಮಾದೇಗೌಡ<br>(ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮಾನ್ಯ ಕಂದಾಯ ಸಚಿವರು |
| ಉತ್ತರಿಸುವ ದಿನಾಂಕ | : | 06.12.2023 |

<table>
<tr><th>ಕ್ರಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣದಲ್ಲಿ 'ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅಮೃತ ಭವನ ' ಕಟ್ಟಡ ನಿರ್ಮಾಣ ಮಾಡುವ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ; (ಸಂಪೂರ್ಣ ವಿವರ ನೀಡುವುದು)</td><td rowspan="4">ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅಮೃತ ಭವನವನ್ನು ರೂ.40.00 ಕೋಟಿಗಳ ವೆಚ್ಚದಲ್ಲಿ ನಿರ್ಮಿಸಲು ಜಿಲ್ಲಾಧಿಕಾರಿಗಳು, ಮಂಡ್ಯ ಇವರಿಂದ ಪ್ರಸ್ತಾವನೆ ಸ್ವೀಕೃತವಾದ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 54 ಡಬ್ಲ್ಯೂಬಿಆರ್ 2015; ದಿನಾಂಕ: 17.05.2016 ರನ್ವಯ ಮಂಡ್ಯ ಜಿಲ್ಲೆಯಲ್ಲಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅಮೃತ ಭವನವನ್ನು ಜಿಲ್ಲಾಧಿಕಾರಿ ಕಛೇರಿ ಹತ್ತಿರದಲ್ಲಿರುವ ಹಳೆ ತಾಲ್ಲೂಕು ಕಛೇರಿ ಆವರಣದಲ್ಲಿ ರೂ.4.00 ಕೋಟಿಗಳ ಮಿತಿಯಲ್ಲಿ ನಿರ್ಮಿಸುವ ಸವಿವರ ಅಂದಾಜು ಪಟ್ಟಿ ಮತ್ತು ನಕ್ಷೆಯನ್ನು ಸರ್ಕಾರಕ್ಕೆ ಸಲ್ಲಿಸಿ ಆಡಳಿತಾತ್ಮಕ ಅನುಮೋದನೆ ಪಡೆಯುವ ಷರತ್ತಿಗೊಳಪಟ್ಟು ಸರ್ಕಾರದ ತಾತ್ವಿಕ ಅನುಮೋದನೆ ನೀಡಲಾಗಿರುತ್ತದೆ.<br><br>ತದನಂತರ, ಮುಖ್ಯ ಅಭಿಯಂತರರು, ಸಂಪರ್ಕ ಮತ್ತು ಕಟ್ಟಡಗಳು (ದ), ಬೆಂಗಳೂರು ಇವರು ದಿನಾಂಕ:04.10.2018ರ ಪತ್ರದಲ್ಲಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅಮೃತ ಭವನವನ್ನು ರೂ.60.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ, ಅನುದಾನ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.<br><br>ಈಗಾಗಲೇ ಹೊರಡಿಸಿರುವ ದಿನಾಂಕ:17.05.2016ರ ಸರ್ಕಾರದ ಆದೇಶದನ್ವಯ ರೂ.4.00 ಕೋಟಿಗಳಿಗೆ ಸೀಮಿತಗೊಳಿಸಿ ಸವಿವರ ಅಂದಾಜು ಪಟ್ಟಿ ಮತ್ತು ನಕ್ಷೆಯೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ ಇವರಿಗೆ ಸೂಚಿಸಲಾಗಿರುತ್ತದೆ.</td></tr>
<tr><td>(ಆ)</td><td>ಸರ್ಕಾರಕ್ಕೆ ಎಷ್ಟು ಕೋಟಿ ರೂಪಾಯಿಗಳ ಅನುದಾನ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ; (ಅಂದಾಜು ಪಟ್ಟಿಯಂತೆ) ಇದುವರೆವಿಗೂ ಬಿಡುಗಡೆ ಆಗಿರುವ ಅನುದಾನ ಎಷ್ಟು; (ಸಂಪೂರ್ಣ ವಿವರ ನೀಡುವುದು)</td></tr>
<tr><td>(ಇ)</td><td>ಅಮೃತ ಭವನ ಕಟ್ಟಡದ ನೀಲಿನಕ್ಷೆಯನ್ನು ಯಾವಾಗ, ಯಾರಿಂದ ಪಡೆಯಲಾಗಿದೆ; (ಸಂಪೂರ್ಣ ವಿವರ ಹಾಗೂ ನೀಲಿನಕ್ಷೆಯನ್ನು ನೀಡುವುದು)</td></tr>
<tr><td>(ಈ)</td><td>ಅಮೃತ ಭವನ ಕಟ್ಟಡದ ನಿರ್ಮಾಣ ಕಾರ್ಯವನ್ನು ಯಾವಾಗ ಆರಂಭಿಸಲಾಗುವುದು ಹಾಗೂ ಕಟ್ಟಡ ನಿರ್ಮಾಣ ವಿಳಂಬ ಆಗಿರುವುದಕ್ಕೆ ಕಾರಣಗಳೇನು?(ವಿವರ ನೀಡುವುದು)</td></tr>
</table>

**ಕಂಇ 105 ಡಬ್ಲ್ಯೂಬಿಆರ್ 2023**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು.